CC No.1074/2018
CW- 5. PW.-4

**ಅಪರ ಸಿವಿಲ್ ನ್ಯಾಯಾಧೀಶರು ಜೆಎಂಎಫ್‌ಸಿ ನ್ಯಾಯಾಲಯ, ಚನ್ನಪಟ್ಟಣ**

**CC No : 1074/2018**

| | | |
|---|---|---|
| ಸಾಕ್ಷಿದಾರರ ಹೆಸರು | : | ಶಿವಲಿಂಗೇಗೌಡ |
| ತಂದೆಯ ಹೆಸರು | : | ಮರೀಗೌಡ |
| ವಯಸ್ಸು | : | 59 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಸುಳ್ಳೇರಿ |

ಸಾಕ್ಷಿಯನ್ನು ಕರೆಯಿಸಲಾಯಿತು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಎ.ಪಿ.ಪಿ ಯವರಿಂದ: ದಿಃ. 19.11.2025**

ಚಾಸಾ 1 ರಿಂದ 4 ಮತ್ತು ಆರೋಪಿ ನನಗೆ ಗೊತ್ತಿಲ್ಲ. ಘಟನೆಯನ್ನು ಪ್ರತ್ಯಕ್ಷವಾಗಿ ನೋಡಿಲ್ಲ, ಘಟನೆಯ ಬಗ್ಗೆ ಗೊತ್ತಿಲ್ಲ. ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

**ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ತೀರ್ಮಾನಿಸಿ ಅಭಿಯೋಜಕರ ಕೋರಿಕೆಯ ಮೇರೆಗೆ ಪಾಟೀ ಸವಾಲುಗೆ ಅನುಮತಿಸಲಾಯಿತು. ಪಾಟೀ ಸವಾಲುಃ ಎ.ಪಿ.ಪಿ. ಯವರಿಂದಃ-**

ದಿ 16.08.2018 ಮಧ್ಯಾಹ್ನ 02.50 ಗಂಟೆಗೆ ಸರ್ಕಾರಿ ಬಾಲಕರ ಪದಕಿ ಪೂರ್ವ ಕಾಲೇಜು ಕೊಠಡಿ ಸಂಖ್ಯೆ 6 ರಲ್ಲಿ ಚಾಸಾ-1 ಮತ್ತು 2 ರವರು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಬ್ಯಾಂಕ್ ನಿಯಮಿತ ಚನ್ನಪಟ್ಟಣ ಆಡಳಿತ ಮಂಡಳಿ ನಿರ್ದೇಶಕರುಗಳ ಚುನಾವಣೆ 2018 ರ ಕರ್ತವ್ಯದಲ್ಲಿದ್ದಾಗ ಆರೋಪಿಯು ಕೃಷ್ಣಾಪುರ ಕ್ಷೇತ್ರಕ್ಕೆ ಸಂಬಂಧಿಸಿದ ಚುನವಾಣೆ ಮತದಾನವನ್ನು ನಿಲ್ಲಿಸುವ ಉದ್ದೇಶದಿಂದ ಮತ ಪೆಟ್ಟಿಗೆ ಸಂಖ್ಯೆ ಕೆಎ0803464 ಕ್ಕೆ ತಾನು ತಂದಿದ್ದ ಇಂಕ್ ಬಾಟಲ್ ನಲ್ಲಿದ್ದ ಇಂಕ್ ಅನ್ನು ಮತಪೆಟ್ಟಿಗೆಗೆ ಹಾಕಿದ್ದನ್ನು ನಾನು ಪ್ರತ್ಯಕ್ಷವಾಗಿ ನೋಡಿದ್ದೇನೆ ಎಂದರೆ ಸರಿಯಲ್ಲ. ಚಾಸಾ-1 ರವರು ಈ ಬಗ್ಗೆ ಕೇಳಿದ್ದಕ್ಕೆ ಚಾಸಾ-1 ಮತ್ತು 2 ರವರ ಮೆಲೆ ಗಲಾಟೆ ಮಾಡಿ ಬೆದರಿಕೆ ಹಾಕಿ ಸರ್ಕಾರಿ ಕೆಲಸಕ್ಕೆ ಹಾಗೂ ಚುನಾವಣಾ ಕರ್ತವ್ಯಕ್ಕೆ ಅಡ್ಡಿ ಪಡಿಸಿರುವುದನ್ನು ನಾನು ಪ್ರತ್ಯಕ್ಷವಾಗಿ ನೋಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಮತ್ತು ಆರೋಪಿತ ರಾಜಿ ಮಾಡಿಕೊಂಡು ಅವನ ಪರ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿದಂತ ಹೇಳಿಕೆಯನ್ನು ನಿಪಿ.6 ರಂತೆ ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ.

CC No.1074/2018
CW- 5. PW.-4

**ಪಾಟೀ ಸವಾಲುಃ ಆರೋಪಿ ಪರಃ ವಕೀಲರಿಂದಃ**

ಆರೋಪಿತರ ಪರವಾಗಿ ಪಾಟೀ ಸವಾಲು ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಬೆರಳಚ್ಚು ಮಾಡಲಾಯಿತು)

**ಓ.ಹೇ.ಕೇ.ಸ.ಒ**

**ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ ಚನ್ನಪಟ್ಟಣ.**